**ಗ್ರಾಮಾಂತರ ಪ್ರದೇಶದಲ್ಲಿ ಪ್ರೌಢಶಾಲೆಗಳ ಅವಶ್ಯಕತೆ**

**288 (717) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ)** :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ನಗರದಲ್ಲಿ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

**ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ** (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಇಲ್ಲ.

ಆ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದಲ್ಲಿ 9ನೇ ತರಗತಿಗೆ ಅನುಮೋದನೆ ಪಡೆಯಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಈ ಕೆಳಗಿನ ನಿಯಮಗಳನ್ನು ಅನುಸರಿಸಬೇಕಾಗುತ್ತದೆ.

ಈ ನಿಯಮಗಳಡಿಯಲ್ಲಿ ಬರುವ ಶಾಲೆಯನ್ನು ಉಪನಿರ್ದೇಶಕರು ವಾರ್ಷಿಕ ಯೋಜನೆಯಲ್ಲಿ ಸೇರಿಸಿದಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.

- 5 ಕಿ.ಮೀ. ವ್ಯಾಪ್ತಿಯೊಳಗೆ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳು ಇರಬಾರದು.
- 8ನೇ ತರಗತಿ ಹೊಂದಿರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಮಾತ್ರ 9ನೇ ತರಗತಿಯೊಂದಿಗೆ ಉನ್ನತೀಕರಿಸಲು ಅವಕಾಶವಿರುತ್ತದೆ.
- 9ನೇ ತರಗತಿಗೆ 70 ಮಕ್ಕಳು ದಾಖಲಾಗುವಂತಿರಬೇಕು.
- ಶೈಕ್ಷಣಿಕವಾಗಿ ಹಿಂದುಳಿದ ಬ್ಲಾಕುಗಳ ಶಾಲೆಗಳಲ್ಲಿ/ಮೈನಾರಿಟಿ ಶಾಲೆಗಳಲ್ಲಿ ಕನಿಷ್ಠ 50 ಮಕ್ಕಳು ದಾಖಲಾಗುವಂತಿರಬೇಕು.
- ಕಟ್ಟಡ ನಿರ್ಮಾಣಕ್ಕೆ ಅವಶ್ಯ ನಿವೇಶನ ಇರಬೇಕು.

ಶಿವಮೊಗ್ಗ ಜಿಲ್ಲೆಯಿಂದ ಯಾವುದೇ ಪ್ರಸ್ತಾವನೆ ಇರುವುದಿಲ್ಲ.